# ಸಾರಾಂಶ

## ಮಾನ್ಯ ಸಭಾಪತಿಯವರು:

ವಿಧಾನ ಪರಿಷತ್ತಿನ 152ನೇ ಅಧಿವೇಶನದ ಉಪವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:12.02.2024 ರಿಂದ 29.02.2024 ರವರೆಗೆ ಒಟ್ಟು 13 ದಿನಗಳು ಅಂದರೆ, 69.25 ಗಂಟೆಗಳು ನಡೆಸಲಾಗಿರುತ್ತದೆ.

ದಿನಾಂಕ:12.02.2024ರಂದು ಬೆಳಗ್ಗೆ 11.00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳನ್ನುದ್ದೇಶಿಸಿ ಭಾಷಣ ಮಾಡುವುದರೊಂದಿಗೆ ಪ್ರಾರಂಭಗೊಂಡಿತು. ವಂದನಾ ನಿರ್ಣಯದ ಮೇಲೆ 06 ಗಂಟೆ 25 ನಿಮಿಷಗಳು ಚರ್ಚೆ ನಡೆಸಿ ದಿನಾಂಕ:21.02.2024 ರಂದು ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣಾ ನಿರ್ಣಯವನ್ನು ಸದನವು ಅಂಗೀಕರಿಸಿತು.

ದಿನಾಂಕ: 16.02.2024ರಂದು ಮಾನ್ಯ ಮುಖ್ಯಮಂತ್ರಿಯವರು 2024-25ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಒಪ್ಪಿಸಿದರು. ಆಯವ್ಯಯ ಅಂದಾಜುಗಳ ಮೇಲೆ ಸುಮಾರು 8 ಗಂಟೆ 18 ನಿಮಿಷಗಳ ಕಾಲ ಚರ್ಚೆ ನಡೆಸಿ, ದಿನಾಂಕ:29.02.2024 ರಂದು ಸರ್ಕಾರದಿಂದ ಉತ್ತರಿಸಲಾಯಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಒಟ್ಟು 07 ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಮಾನ್ಯ ಸಭಾಪತಿಯವರು ಒಂದೇ ಕ್ಷೇತ್ರದಿಂದ ಸತತವಾಗಿ ಎಂಟು ಬಾರಿ ವಿಧಾನ ಪರಿಷತ್ತಿಗೆ ಆಯ್ಕೆಯಾಗಿ ವಿಶ್ವ ದಾಖಲೆ ಗಳಿಸಿ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ದಾಖಲೆಯಾಗಿರುವುದಕ್ಕೆ ಸದನದಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ನಡೆದ ಉಪ ಚುನಾವಣೆಯಲ್ಲಿ ವಿಧಾನ ಪರಿಷತ್ತಿಗೆ ಚುನಾಯಿತರಾದ ಶ್ರೀ ಪುಟ್ಟಣ್ಣ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02 ಮತ್ತು 03 ಪಟ್ಟಿಗಳನ್ನು ಮಂಡಿಸಲಾಯಿತು.

...2

ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, ೨೦೨೩ನ್ನು ಪರಿಶೀಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯ ವರದಿ, ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ವರದಿ, ಕರ್ನಾಟಕ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ ೧೦೧ನೇ ವಿಶೇಷ ವರದಿ ಹಾಗೂ ೧೦೨ನೇ ವರದಿಗಳು, ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 30ನೇ ವರದಿ, ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಎರಡನೇ ವರದಿಗಳನ್ನು ಸದನದಲ್ಲಿ ಮಂಡಿಸಲಾಯಿತು.

ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2022-23ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II), 2023-24ನೇ ಸಾಲಿನ ಪೂರಕ ಅಂದಾಜು (ಎರಡನೇ ಹಾಗೂ ಅಂತಿಮ ಕಂತು)ಗಳನ್ನು, 5ನೇ ರಾಜ್ಯ ಹಣಕಾಸು ಆಯೋಗವು ರಾಜ್ಯದ ಪಂಚಾಯತ್ ರಾಜ್ ಸಂಸ್ಥೆ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಅನುದಾನ ಹಂಚಿಕೆ ಮತ್ತು ಇತರೆ ಅಧಿಕಾರದ ಬಗ್ಗೆ ನೀಡಿರುವ ಪ್ರಥಮ ವರದಿಯನ್ನು ಮಂಡಿಸಲಾಯಿತು.

ಅರ್ಜಿಗಳ ಸಮಿತಿಯ 02 ಅರ್ಜಿಗಳನ್ನು ಸದನದಲ್ಲಿ ಮಂಡಿಸಲಾಯಿತು.

ರಾಜ್ಯದಲ್ಲಿ 2020-21ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ, ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿಯ ಅವಧಿಯನ್ನು ದಿನಾಂಕ:14.01.2024ರಿಂದ 13.01.2025ರವರೆಗೆ ಹನ್ನೆರಡು ತಿಂಗಳ ಕಾಲ ವಿಸ್ತರಿಸುವ ಪ್ರಸ್ತಾವನ್ನು ಮಂಡಿಸಿ ಸಹಮತಿಯನ್ನು ಪಡೆಯಲಾಯಿತು.

ನಿಯಮ 59 ರಡಿಯಲ್ಲಿ ಒಟ್ಟು 01 ಸೂಚನೆಯನ್ನು ಸ್ವೀಕರಿಸಲಾಗಿದ್ದು, ಸದರಿ ಸೂಚನೆಯನ್ನು ನಿಯಮ 72ರಡಿ ಚರ್ಚಿಸಿ, ಉತ್ತರಿಸಲಾಯಿತು.

...3

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1144 ಪ್ರಶ್ನೆಗಳನ್ನು ಸ್ವೀಕರಿಸಲಾಗಿರುತ್ತದೆ. ಅದರಲ್ಲಿ 120 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 72 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 43 ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು 1012 ಪ್ರಶ್ನೆಗಳ ಪೈಕಿ 792 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 05 ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ. ಒಂದು ಸೂಚನೆಯನ್ನು ಚರ್ಚಿಸಲಾಗಿರುತ್ತದೆ.

ನಿಯಮ 72ರಡಿಯಲ್ಲಿ 115 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 22 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 47 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 87 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 09 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 46 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ಎ ಅಡಿಯಲ್ಲಿ ಒಟ್ಟು 8 ಸೂಚನೆಗಳನ್ನು ಪ್ರಸ್ತಾಪಿಸಲಾಗಿದ್ದು, ಒಂದು ಸೂಚನೆಗೆ ಉತ್ತರಿಸಲಾಯಿತು.

ಮಾನ್ಯ ಶಾಸಕರಾದ ಶ್ರೀ ಎನ್. ರವಿಕುಮಾರ್ ಅವರು ನೀಡಿರುವ ಖಾಸಗಿ ಸದಸ್ಯರುಗಳ ವಿಧೇಯಕವನ್ನು ಮಂಡಿಸಲಾಯಿತು ಹಾಗೂ ಮಾನ್ಯ ಶಾಸಕರಾದ ಶ್ರೀ ಯು.ಬಿ.ವೆಂಕಟೇಶ್ ಅವರು ಮಂಡಿಸಿದ ಖಾಸಗಿ ನಿರ್ಣಯದ ಮೇಲೆ ಚರ್ಚಿಸಲಾಯಿತು.

ಶೂನ್ಯ ವೇಳೆ ಪ್ರಸ್ತಾವನೆಯ ಒಟ್ಟು 46 ಸೂಚನೆಗಳ ಪೈಕಿ 24 ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಒಟ್ಟು 27 ವಿಧೇಯಕಗಳ ಪೈಕಿ ಎರಡು ವಿಧೇಯಕಗಳನ್ನು ಪರಿಶೀಲನಾ ಸಮಿತಿಗೆ ವಹಿಸಲಾಯಿತು. ಉಳಿದ 25 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

...4.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ಸದಸ್ಯರು ಮಾತನಾಡಿದ ನಂತರ:-**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ಮಾನ್ಯ ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, **ಸದನವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡುತ್ತಿದ್ದೇನೆ.**

****